ವಿಷಯ:- ರಾಜ್ಯದಲ್ಲಿರುವ ನಿರುದ್ಯೋಗಿಗಳ ಕುರಿತು.

170 (369)

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ):- ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ನಿರುದ್ಯೋಗಿಗಳ ಸಂಖ್ಯೆ ಎಷ್ಟು;

ಆ) ಇದರಲ್ಲಿ ಮಹಿಳೆಯರು ಎಷ್ಟು ಪುರುಷರು ಎಷ್ಟು;

ಇ) ನಿರುದ್ಯೋಗ ಅಂತರವನ್ನು ಕಡಿಮೆ ಮಾಡಲು ಸರ್ಕಾರದವರು ಕೈಕೊಂಡಿರುವ ಕ್ರಮಗಳೇನು;

ಈ) ವಿದ್ಯಾವಂತ ನಿರುದ್ಯೋಗಿಗಳೆಷ್ಟು; ಅವಿದ್ಯಾವಂತ ನಿರುದ್ಯೋಗಿಗಳೆಷ್ಟು;

ಉ) ಪದವೀಧರ ನಿರುದ್ಯೋಗಿಗಳೆಷ್ಟು;

ಊ) ವೈದ್ಯಕೀಯ ಶಿಕ್ಷಣ ಪಡೆದ ನಿರುದ್ಯೋಗಿಗಳೆಷ್ಟು;

ಋ) ತಾಂತ್ರಿಕ ಶಿಕ್ಷಣ ಪಡೆದ ನಿರುದ್ಯೋಗಿಗಳೆಷ್ಟು?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು):-

ಅ) ರಾಜ್ಯದ ಉದ್ಯೋಗ ವಿನಿಮಯ ಕೇಂದ್ರಗಳ ದಾಖಲೆಯಲ್ಲಿ 1996ನೇ ಡಿಸೆಂಬರ್ ಮಾಹೆಯ ಅಂತ್ಯಕ್ಕೆ ಒಟ್ಟು 1794520 ಅಭ್ಯರ್ಥಿಗಳು ಉದ್ಯೋಗಾಕಾಂಕ್ಷಿಗಳಾಗಿರುತ್ತಾರೆ.

ಆ) ಮಹಿಳೆಯರು 393596

ಪುರುಷರು 14,00,924

ಇ) ನಿರುದ್ಯೋಗ ಸಮಸ್ಯೆಯನ್ನು ಬಗೆಹರಿಸಲು ರಾಜ್ಯ ಸರ್ಕಾರವು ಹಲವಾರು ಕೇಂದ್ರ ಪುರಸ್ಕೃತ ಹಾಗೂ ರಾಜ್ಯ ಯೋಜನಾ ಕಾರ್ಯಕ್ರಮಗಳನ್ನು ಗ್ರಾಮೀಣ ಹಾಗೂ ವಿದ್ಯಾವಂತ ನಿರುದ್ಯೋಗ ಕಡಿಮೆಗೊಳಿಸುವ ದಿಸೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಈ) ಉದ್ಯೋಗ ವಿನಿಮಯ ಕೇಂದ್ರಗಳ ದಾಖಲೆಯಲ್ಲಿರುವಂತೆ ವಿದ್ಯಾವಂತ ನಿರುದ್ಯೋಗಿಗಳ ಸಂಖ್ಯೆ: 14,55,836 ಹಾಗೂ ಅವಿದ್ಯಾವಂತ ನಿರುದ್ಯೋಗಿಗಳ ಸಂಖ್ಯೆ: 3,38,684.

ಉ) 90,743.

ಊ) 866.

ಋ) 1,09,252.